Received on 07/7/2021
WUP.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ ಕಾಲೇಜು (ಸ್ವಾಯತ್ತ) ಮಂಡ್ಯ, ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ, ಬೆಂಗಳೂರು ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇವುಗಳಿಗೆ ಸಂಬಂಧಿಸಿದ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಹಾಗೂ ಮೂಲಭೂತ ಸೌಲಭ್ಯಗಳನ್ನು ಸಂಬಂಧಿಸಿದ ವಿಶ್ವವಿದ್ಯಾಲಯಗಳಿಗೆ ಹಸ್ತಾಂತರಿಸುವ ಕುರಿತು.

ಓದಲಾಗಿದೆ:
1. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2019.
2. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳು ಮತ್ತು ಕೆಲವು ಇತರ ಕಾನೂನು(ಎರಡನೇ ತಿದ್ದುಪಡಿ) ವಿಧೇಯಕ, 2020.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಪತ್ರ ಸಂಖ್ಯೆ: ಕಾಶಿಇ/91/ತಾಂಕೋ/ಕ್ಲವಿ/2020-21, ದಿನಾಂಕ: 24-02-2021.
4. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಪತ್ರ ಸಂಖ್ಯೆ: ಕಾಶಿಇ/91/ತಾಂಕೋ/ಕ್ಲವಿ/2020-21, ದಿನಾಂಕ: 24-02-2021.
5. ಕಾಲೇಜು ಶಿಕ್ಷಣ ನಿರ್ದೇಶಕರು, ಇವರ ಪತ್ರ ಸಂಖ್ಯೆ: ಕಾಶಿಇ/ಶೈವಿ/18/ಮಕ್ಲವಿವಿ/ಚರಾಸ್ತಿ/2020-21, ದಿನಾಂಕ: 24-06-2021.

*****

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2019ರನ್ವಯ ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಕಾಲೇಜನ್ನು ಉನ್ನತೀಕರಿಸುವ ಮೇರೆಗೆ ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇದರ ಮೇಲೆ ಪ್ರಾದೇಶಿಕ ಅಧಿಕಾರವನ್ನು ಹೊಂದಿರುವ ಏಕಾತ್ಮಕ ಸ್ವರೂಪದ ಮಂಡ್ಯ ವಿಶ್ವವಿದ್ಯಾಲಯ ಮತ್ತು ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ ಇವುಗಳನ್ನು ಉನ್ನತೀಕರಿಸುವ ಮೇರೆಗೆ ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ ಇವುಗಳ ಮೇಲೆ ಪ್ರಾದೇಶಿಕ ಅಧಿಕಾರವನ್ನು ಹೊಂದಿರುವ ಏಕಾತ್ಮಕ ಸ್ವರೂಪದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳು ಮತ್ತು ಕೆಲವು ಇತರ ಕಾನೂನು(ಎರಡನೇ ತಿದ್ದುಪಡಿ) ಅಧ್ಯಾದೇಶ, 2020ರನ್ವಯ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ಕ್ಕೆ ತಿದ್ದುಪಡಿ ತರುವ ಮೂಲಕ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ) ಅನ್ನು ಉನ್ನತೀಕರಿಸುವ ಮೇರೆಗೆ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇದರ ಮೇಲೆ ಪ್ರಾದೇಶಿಕ ಅಧಿಕಾರವನ್ನು ಹೊಂದಿರುವ ಏಕಾತ್ಮಕ ಸ್ವರೂಪದ ನೃಪತುಂಗ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3), (4) ಮತ್ತು (5)ರ ಪತ್ರಗಳಲ್ಲಿ ಕ್ರಮವಾಗಿ ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇದರ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಮಂಡ್ಯ ವಿಶ್ವವಿದ್ಯಾಲಯಕ್ಕೆ ಮತ್ತು ಮಹಾರಾಣಿ ಕಲಾ,

-2

ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ ಇವುಗಳಿಗೆ ಸೇರಿದ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯಕ್ಕೆ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇದರ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ನೃಪತುಂಗ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸುವಂತೆ/ವರ್ಗಾಯಿಸುವ ಸಂಬಂಧದಲ್ಲಿ ಆದೇಶ ಹೊರಡಿಸುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ ಇದರ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ಮಂಡ್ಯ ವಿಶ್ವವಿದ್ಯಾಲಯಕ್ಕೆ, ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ ಇವುಗಳಿಗೆ ಸೇರಿದ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯಕ್ಕೆ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇದರ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ನೃಪತುಂಗ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು/ವರ್ಗಾಯಿಸಲು ಈ ಕೆಳಕಂಡ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ: ಇಡಿ/34/ಯುಆರ್‌ಸಿ/2021,</u>**

**<u>ಬೆಂಗಳೂರು ದಿನಾಂಕ: 06.07.2021</u>**

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಹಿಂದೆ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿದ್ದು, ಪ್ರಸ್ತುತ ಏಕಾತ್ಮಕ ವಿಶ್ವವಿದ್ಯಾಲಯಗಳಾಗಿ ಉನ್ನತೀಕರಿಸಲಾಗಿರುವ ಸರ್ಕಾರಿ ಕಾಲೇಜು (ಸ್ವಾಯತ್ತ) ಮಂಡ್ಯ, ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರಿಯ ಗೃಹವಿಜ್ಞಾನ ಸಂಸ್ಥೆ, ಬೆಂಗಳೂರು ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇವುಗಳಿಗೆ ಸಂಬಂಧಿಸಿದ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ಹಾಗೂ ಮೂಲಭೂತ ಸೌಲಭ್ಯಗಳನ್ನು ಕ್ರಮವಾಗಿ ಮಂಡ್ಯ, ಮಹಾರಾಣಿ ಕ್ಲಸ್ಟರ್ ಹಾಗೂ ನೃಪತುಂಗ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ಪ್ರಾಧಿಕಾರಗಳ ಮೂಲಕ ಕಾನೂನು ರೀತಿಯಲ್ಲಿ ಯಥಾಸ್ಥಿತಿಯಲ್ಲಿ ಇದರೊಂದಿಗೆ ಲಗತ್ತಿಸಿರುವ ಅನುಬಂಧದನ್ವಯ ಹಸ್ತಾಂತರಿಸಲು/ವರ್ಗಾಯಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರಿಗೆ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹೇಶ್.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

# ಅನುಬಂಧ

| ಕ್ರಸಂ. | ವಿವರಗಳು | ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಬೆಂಗಳೂರು. | ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಬೆಂಗಳೂರು | ಶ್ರೀಮತಿ. ವಿಹೆಚ್‌ಡಿ ಕೇಂದ್ರೀಯ ಗೃಹ ವಿಜ್ಞಾನ ಕಾಲೇಜು, ಶೇಷಾದ್ರಿ ರಸ್ತೆ, ಬೆಂಗಳೂರು. | ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ಬೆಂಗಳೂರು | ಸರ್ಕಾರಿ ಕಾಲೇಜು (ಸ್ವಾಯತ್ತ), ಮಂಡ್ಯ |
|---|---|---|---|---|---|---|
| 1 | ಕಾಲೇಜು/ವಿದ್ಯಾರ್ಥಿನಿಲಯದಲ್ಲಿ ಸುಸ್ಥಿತಿಯಲ್ಲಿರುವ ಪೀಠೋಪಕರಣ ಹಾಗೂ ಇತರ ವಸ್ತುಗಳ ವಿವರ | 2412 | 5541 | 5287 | 2736 | 5350 |
| 2 | LIBRARY BOOKS | 64819 | 49626 | 38963 | 90976 | 62027 |
| 3. | ಬ್ಯಾಂಕ್ ಖಾತೆಯಲ್ಲಿರುವ ಒಟ್ಟು ಮೊತ್ತ | ರೂ. 3,79,46,080/- | ರೂ. 61,36,582/- | ರೂ. 1,90,74,821/- | ರೂ. 1,25,37,643/- | ರೂ. 4,64,64,407/- |
| 4. | ಕಾಲೇಜಿನ ಅಸ್ತಿತ್ವದಲ್ಲಿರುವ ಜಮೀನಿನ ವಿಸ್ತೀರ್ಣ | 13703.29(Sqm) | 18211.82(Sqm) | 4276.08(Sqm) | 10.00 ಎಕರೆ | 31.08 ಎಕರೆ |
| | | ಮೂರು ಕಾಲೇಜುಗಳ ಒಟ್ಟು ವಿಸ್ತೀರ್ಣ 14 ಎಕರೆ | | | | |

ಸರ್ಕಾರಿ ಕಾಲೇಜು (ಸ್ವಾಯತ್ತ) ಮಂಡ್ಯ, ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ ಕೇಂದ್ರೀಯ ಗೃಹವಿಜ್ಞಾನ ಸಂಸ್ಥೆ, ಬೆಂಗಳೂರು ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು(ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇವುಗಳಿಗೆ ಸಂಬಂಧಿಸಿದ ಮೇಲ್ಕಂಡ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಹಾಗೂ ಮೂಲಭೂತ ಸೌಲಭ್ಯಗಳನ್ನು ಕ್ರಮವಾಗಿ ಮಂಡ್ಯ, ಮಹಾರಾಣಿ ಕ್ಲಸ್ಟರ್ ಹಾಗೂ ನೃಪತುಂಗ ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸುವುದು.

(ಮಹೇಶ್.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

<u>ಕಾಲೇಜು ಶಿಕ್ಷಣ ಇಲಾಖೆ</u>

**"ಕನ್ನಡ ಕಾಯಕ ವರ್ಷ ೨೦೨೦-೨೧"**

ಸಂಖ್ಯೆ:ಕಾಶಿಇ/ಶೈವಿ/18/ಮಕ್ಲವಿವಿ/2020-21/ಚರಾಸ್ಥಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 07.07.2021.

ಸರ್ಕಾರಿ ಕಾಲೇಜು (ಸ್ವಾಯತ್ತ) ಮಂಡ್ಯ, ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಹಾಗೂ ಶ್ರೀಮತಿ ವಿ.ಹೆಚ್.ಡಿ. ಕೇಂದ್ರಿಯ ಗೃಹ ವಿಜ್ಞಾನ ಸಂಸ್ಥೆ, ಬೆಂಗಳೂರು ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇವುಗಳಿಗೆ ಸಂಬಂಧಿಸಿದ ಚರಾಸ್ಥಿ ಮತ್ತು ಸ್ಥಿರಾಸ್ತಿಗಳನ್ನು ಹಾಗೂ ಮೂಲಭೂತ ಸೌಲಭ್ಯಗಳನ್ನು ಕ್ರಮವಾಗಿ ಮಂಡ್ಯ, ಮಹಾರಾಣಿ ಕ್ಲಸ್ಟರ್ ಹಾಗೂ ನೃಪತುಂಗ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ಪ್ರಾಧಿಕಾರಗಳ ಮೂಲಕ ಕಾನೂನು ರೀತಿಯಲ್ಲಿ ಯಥಾಸ್ಥಿತಿಯಲ್ಲಿ ಇದರೊಂದಿಗೆ ಲಗತ್ತಿಸಿರುವ ಅನುಬಂಧದನ್ವಯ ಹಸ್ತಾಂತರಿಸಲು / ವರ್ಗಾಯಿಸಲು ಅಗತ್ಯ ಕ್ರಮಕೈಗೊಳ್ಳಲು ಆದೇಶಿಸಿರುವ ಸರ್ಕಾರಿ ಆದೇಶ ಸಂಖ್ಯೆ: ಇಡಿ /34/ಯುಆರ್‌ಸಿ/ 2021, ಬೆಂಗಳೂರು ದಿನಾಂಕ:06.07.2021 ನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ: <u>ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:</u>

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು,
3. ಕುಲಪತಿಗಳು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.
4. ಕುಲಪತಿಗಳು, ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.
5. ಕುಲಪತಿಗಳು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು.
6. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಕಛೇರಿ ಪ್ರತಿ.